ಓ ಜನರೇ, ಅಲ್ಲಾಹನ ಕಡೆಗೆ ಪಶ್ಚಾತ್ತಾಪ ಪಡಿರಿ. ಏಕೆಂದರೆ ನಾನು ದಿನಕ್ಕೆ ನೂರು ಬಾರಿ ಅವನ ಕಡೆಗೆ ಪಶ್ಚಾತ್ತಾಪ ಪಡುತ್ತೇನೆ

ಅಗರ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) - ಇವರು ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಸಹಚರರಲ್ಲಿ ಒಬ್ಬರಾಗಿದ್ದರು - ರಿಂದ ವರದಿ. ಅವರು ಹೇಳಿದರು: ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಓ ಜನರೇ,
ಅಲ್ಲಾಹನ ಕಡೆಗೆ ಪಶ್ಚಾತ್ತಾಪ ಪಡಿರಿ. ಏಕೆಂದರೆ ನಾನು ದಿನಕ್ಕೆ ನೂರು ಬಾರಿ ಅವನ ಕಡೆಗೆ ಪಶ್ಚಾತ್ತಾಪ ಪಡುತ್ತೇನೆ." [صحيح] [رواه مسلم]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಜನರಿಗೆ ಅಲ್ಲಾಹನ ಕಡೆಗೆ ನಿರಂತರ ಪಶ್ಚಾತ್ತಾಪ ಪಡಲು ಮತ್ತು ಅವನಲ್ಲಿ ಕ್ಷಮೆಯಾಚನೆ ಮಾಡಲು ಆದೇಶಿಸುತ್ತಾರೆ. ತನ್ನ ಗತ ಮತ್ತು ಮುಂಬರುವ ಪಾಪಗಳೆಲ್ಲವೂ ಕ್ಷಮಿಸಲ್ಪಟ್ಟಿದ್ದರೂ ಸಹ, ತಾನು ಪ್ರತಿದಿನ ನೂರಕ್ಕಿಂತ ಹೆಚ್ಚು ಬಾರಿ ಅಲ್ಲಾಹನ ಕಡೆಗೆ ಪಶ್ಚಾತ್ತಾಪ ಪಡುತ್ತೇನೆ ಮತ್ತು ಅವನಲ್ಲಿ ಕ್ಷಮೆಯಾಚನೆ ಮಾಡುತ್ತೇನೆಂದು ಅವರು ತಮ್ಮ ಬಗ್ಗೆ ತಿಳಿಸುತ್ತಾರೆ. ಇದು ಸರ್ವಶಕ್ತನಾದ ಅಲ್ಲಾಹನಿಗೆ ತೋರುವ ಸಂಪೂರ್ಣ ವಿನಯ ಮತ್ತು ದಾಸ್ಯವನ್ನು ಸೂಚಿಸುತ್ತದೆ.

http://www.sunnah.global/hadeeth/kn/show/4809